ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಮಿಥುನ ಕನ್‌ಸ್ಟ್ರಕ್ಷನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ಹುಕ್ಕೇರಿ ಮತ್ತು ನಿಪ್ಪಾಣಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 1.0 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳದಲ್ಲಿ 10.20 ಮೆ.ವ್ಯಾ. ಸಾಮರ್ಥ್ಯಕ್ಕೆ ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ:** 1 ಸರ್ಕಾರದ ಪತ್ರ ಸಂಖ್ಯೆ: ಇಎನ್ 106 ಎನ್‌ಸಿಇ 2013 ದಿನಾಂಕ:22.05.2013

2 ಸರ್ಕಾರದ ಪತ್ರ ಸಂಖ್ಯೆ: ಇಎನ್ 148 ಎನ್‌ಸಿಇ 2014 ದಿನಾಂಕ:10.07.2014.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಏಕ ಕಡತ ಪದ್ಧತಿಯಲ್ಲಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 1097

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2) ರ ಸರ್ಕಾರಿ ಪತ್ರದಲ್ಲಿ, ಮೆ:ಮಿಥುನ ಕನ್‌ಸ್ಟ್ರಕ್ಷನ್ಸ್ ಪ್ರೈ.ಲಿ., ಕಂಪನಿಯವರಿಗೆ ಬೆಳಗಾವಿ ಜಿಲ್ಲೆಯ ನಿಪ್ಪಾಣಿ ತಾಲ್ಲೂಕಿನ ಗೊಂಡಿಕುಪ್ಪಿ ಪಿ.ಎಫ್ ಗ್ರಾಮದಲ್ಲಿ 1.0 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಎರಡು ವರ್ಷದಲ್ಲಿ ಡಿಪಿಆರ್ ತಯಾರಿಸಿ ಸಲ್ಲಿಸಬೇಕೆಂಬ ಷರತ್ತಿಗೊಳಪಟ್ಟು ಸರ್ಕಾರದಿಂದ ತತ್ವಶಃ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಏಕ ಕಡತ ಪದ್ಧತಿ ಅಡಿ ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಮೆ: ಮಿಥುನ ಕನ್‌ಸ್ಟ್ರಕ್ಷನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯು ತಮಗೆ ಬೆಳಗಾವಿ ಜಿಲ್ಲೆಯ ಹುಕ್ಕೇರಿ ಮತ್ತು ನಿಪ್ಪಾಣಿ ತಾಲ್ಲೂಕಿನ ಗೊಂಡಿಕುಪ್ಪಿ ಪಿಎಫ್ ಮತ್ತು ಕಣಗಾಲ್ ಗ್ರಾಮಗಳಲ್ಲಿ ತತ್ವಶಃ ಅನುಮತಿ ನೀಡಿರುವ 1.0 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳದಲ್ಲಿ 10.20 ಮೆ.ವ್ಯಾ. ಸಾಮರ್ಥ್ಯದ ಲಭ್ಯತೆ ಇದ್ದು, ಅದರಂತೆ 10.20 ಮೆ.ವ್ಯಾ. ಸಾಮರ್ಥ್ಯವನ್ನು ಹಂಚಿಕೆ ಮಾಡುವಂತೆ ಕೋರಿ, ಡಿಪಿಆರ್ ಅನ್ನು ಸಲ್ಲಿಸಿದ್ದು, ಯೋಜನೆಯ ಪ್ರದೇಶವು ಖಾಸಗಿ ಭೂಮಿಯಾಗಿದ್ದು, ಹೆಚ್ಚಳಗೊಳ್ಳಲಿರುವ ಸಾಮರ್ಥ್ಯವನ್ನು ಸದರಿ ಖಾಸಗಿ ಸ್ಥಳದಲ್ಲಿಯೇ ಅನುಷ್ಠಾನಗೊಳಿಸುವುದಾಗಿ ತಿಳಿಸಿರುವುದನ್ನು ಪರಿಗಣಿಸಿ, ಕಂಪನಿಯ ಕೋರಿಕೆಯಂತೆ 10.20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶ ಹೊರಡಿಸಲು ಶಿಫಾರಸ್ಸು ಮಾಡುತ್ತಾ, ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶವನ್ನು ಒದಗಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 210 ಎನ್‌ಸಿಇ 2015,**
**ಬೆಂಗಳೂರು, ದಿನಾಂಕ : 23.09.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಮೆ: ಮಿಥುನ ಕನ್‌ಸ್ಟ್ರಕ್ಷನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ಹುಕ್ಕೇರಿ ಮತ್ತು ನಿಪ್ಪಾಣಿ ತಾಲ್ಲೂಕಿನ ಗೊಂಡಿಕುಪ್ಪಿ ಪಿಎಫ್ ಮತ್ತು ಕಣಗಾಲ್ ಗ್ರಾಮಗಳಲ್ಲಿ 1.0 ಮೆ.ವ್ಯಾ. ಸಾಮರ್ಥ್ಯಕ್ಕೆ ತತ್ವಶಃ ಅನುಮತಿ ನೀಡಿರುವ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 10.20 ಮೆ.ವ್ಯಾ.ಗೆ ಹೆಚ್ಚಿಸಿ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

G.M
K.R.E.D.L
Wind Section
Inward No. 15905
Date: 14-10-2015

--2)

| Sl. No. | Toposheet No. | Proposed capacity in MW | Near by villages of the proposed area and district | Geographical Area Details of the Project |
|---|---|---|---|---|
| 1 | 47L/7 | 10.20 MW (6 Nosx1700kW) | Gondikuppi PF and Kanagal Villages of Hukkeri & Nippani Taluks, Belagavi District. | The area comes under private land near Nippani and crossing of main power line. The area is held in the following Geographical Co-ordinates:<br>**Latitude**: 16°20'45"- 16°22'1.3" N<br>**Longitude**: 74°25'0"- 74°27'28" E<br>**peaks: 766, 645 & 640** m Amsl |

ಷರತ್ತುಗಳು:-

1. ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಯುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

| ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ |
|---|---|---|
| > 200 ಕಿ.ವ್ಯಾ. ನಿಂದ 300 ಕಿ.ವ್ಯಾ. | 18 | 1 |
| > 300 ಕಿ.ವ್ಯಾ. ನಿಂದ 500 ಕಿ.ವ್ಯಾ. | 15 | 1 |
| > 500 ಕಿ.ವ್ಯಾ. ನಿಂದ 750 ಕಿ.ವ್ಯಾ. | 12 | 1 |
| > 750 ಕಿ.ವ್ಯಾ. ನಿಂದ 1000 ಕಿ.ವ್ಯಾ. | 8 ರಿಂದ 10 | 1 |

5 ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6 ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಪಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

7 ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ/ ಕೆ.ಪಿ.ಟಿ.ಸಿ.ಎಲ್.ನೊಂದಿಗೆ ನೀತಿ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ / ವೀಲಿಂಗ್ ಆಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.

9 ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009 ರನ್ವಯ ಅರ್ಹ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.

10 ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

11 ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

23/9/15

**ಇವರಿಗೆ:**

ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.

2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.

6 ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.

7 ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.

8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ

9 M/s Mithuna Constructions Private Limited., No. 1342, Skanda Towers, 5th Floor, MCEHS Layout, Dr.Shivaramkaranth Nagar, Jakkur Post, Bangalore-560 064.

10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.